**ಸಾಕ್ಷಿಯನ್ನು ದಿಃ 19.02.2026 ರಂದು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಂದುವರೆದ ಮುಖ್ಯ ವಿಚಾರಣೆಃ ಅರ್ಜಿದಾರರ ಪರ ವಕೀಲರಿಂದಃ**

ಪ್ರಥಮ ವರ್ತಮಾನ ವರದಿಯ ಯಥಾ ನಕಲನ್ನು ಹಾಜರುಪಡಿಸಿದ್ದು, ನಿಪಿ. 1 ಎಂದು,
ದೂರಿನ ಯಥಾ ನಕಲನ್ನು ಹಾಜರುಪಡಿಸಿದ್ದು, ನಿಪಿ. 2 ಎಂದು,
ಸ್ಥಳ ಪಂಚನಾಮೆಯ ಯಥಾ ನಕಲನ್ನು ಹಾಜರುಪಡಿಸಿದ್ದು, ನಿಪಿ. 3 ಎಂದು,
ಕಚ್ಚಾ ನಕ್ಷೆಯ ಯಥಾ ನಕಲನ್ನು ಹಾಜರುಪಡಿಸಿದ್ದು, ನಿಪಿ. 4 ಎಂದು,
ಐಎಂವಿ ವರದಿಯ ಯಥಾ ನಕಲನ್ನು ಹಾಜರುಪಡಿಸಿದ್ದು, ನಿಪಿ. 5 ಎಂದು,
ಶವ ತನಿಖಾ ವರದಿಯ ಯಥಾ ನಕಲನ್ನು ಹಾಜರುಪಡಿಸಿದ್ದು, ನಿಪಿ. 6 ಎಂದು,
ಪಿ.ಎಂ. ವರದಿಯ ಯಥಾ ನಕಲನ್ನು ಹಾಜರುಪಡಿಸಿದ್ದು, ನಿಪಿ. 7 ಎಂದು,
ಅಂತಿಮ ದೋಷಾರೋಪಣಾ ಪಟ್ಟಿಯ ಯಥಾ ನಕಲನ್ನು ಹಾಜರುಪಡಿಸಿದ್ದು, ನಿಪಿ. 8 ಎಂದು,
ಮೃತರ ಆಧಾರ್ ಕಾರ್ಡ್ ಮತ್ತು ಎಸ್ ಎಸ್ ಎಲ್ ಸಿ ಯ ಅಂಕಪಟ್ಟಿಯ ನೋಟರಿಕೃತ ದಾಖಲೆ ಹಾಜರುಪಡಿಸಿದ್ದು, ಅವುಗಳನ್ನು ಒಟ್ಟಾಗಿ ನಿಪಿ. 9 ಎಂದು,
1 ರಿಂದ 3 ರ ಅರ್ಜಿದಾರರ ಆಧಾರ್ ಕಾರ್ಡ್ ನ ನೋಟರಿಕೃತ ದಾಖಲೆ ಹಾಜರುಪಡಿಸಿದ್ದು,ಅವುಗಳನ್ನು ಒಟ್ಟಾಗಿ ನಿಪಿ. 10 ಎಂದುಗುರುತಿಸಲಾಯಿತು. ಆದುದರಿಂದ ನಾನು ಕೋರಿರುವಂತೆ ಅರ್ಜಿಯನ್ನು ಪುರಸ್ಕರಿಸಬೇಕಾಗಿ ಪ್ರಾರ್ಥಿಸುತ್ತೇನೆ.

**ಪಾಟೀ ಸವಾಲುಃ ಎದುರುದಾರರ ಪರ ವಕೀಲರಿಂದಃ**

ಸಮಯಾವಕಾಶವನ್ನು ಕೋರಿದ್ದು ನೀಡಲಾಯಿತು.

(ನನ್ನ ಹೇಳಿಕೆಯಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು)

ಓ.ಹೇ.ಕೇ.ಸರಿ ಇದೆ.

ಸಹಿ/-

ಹೆಚ್ಚುವರಿ ಲಘು ವ್ಯವಹಾರಗಳ ನ್ಯಾಯಾಧೀಶರು
ಮತ್ತು ಎಂ.ಎ.ಸಿ.ಟಿ., ಮೈಸೂರು.